ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ದ್ವಿ.ಪಿ.ಪೂ.ಪರೀಕ್ಷೆ/10/2019-20 ದಿನಾಂಕ: 10.08.2020

## ಸು ತ್ತೋ ಲೆ

ವಿಷಯ: 2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ 14/7/2020.
2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ 03/8/2020.

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ 2020ರ ಪೂರಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಯಲ್ಲಿ 31/07/2020ರ ವರೆಗೆ ಅವಕಾಶ ನೀಡಲಾಗಿತ್ತು. ವಿದ್ಯಾರ್ಥಿಗಳು ಹಾಗೂ ಪೋಷಕರ ಮನವಿಯ ಮೇರೆಗೆ ದಿನಾಂಕವನ್ನು ಈ ಕೆಳಕಂಡತೆ ವಿಸ್ತರಿಸಿ ಆದೇಶಿಸಿಲಾಗಿತ್ತು

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಕಾಲೇಜಿನವರು Online Portal ನಲ್ಲಿ update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 05/08/2020 | 06/08/2020 | 07/08/2020 |

ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ ದಿನಾಂಕವನ್ನು ವಿದ್ಯಾರ್ಥಿಗಳು ಹಾಗೂ ಪೋಷಕರು ಕೇಂದ್ರ ಕಛೇರಿಗೆ ಸಲ್ಲಿಸಿರುವ ಮನವಿಯ ಮೇರೆಗೆ 11/08/2020 ರವರೆಗೆ ವಿಸ್ತರಿಸಿ ಆದೇಶಿಸಲಾಗಿದೆ. ಈ ಸಂಬಂಧ ಈ ಕೆಳಗಿನ ಪಟ್ಟಿಯನ್ವಯ ಕ್ರಮ ಕೈಗೊಳ್ಳಲು ತಿಳಿಸಿದೆ.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಕಾಲೇಜಿನವರು Online Portal ನಲ್ಲಿ update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 11/08/2020 | 12/08/2020 | 12/08/2020 |

ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು Online Portal ನಲ್ಲಿ update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು ಪ್ರಾಂಶುಪಾಲರಿಂದ update ಮಾಡಿರುವುದಕ್ಕೆ ಮುಚ್ಚಳಿಕೆ ಪತ್ರ ಪಡೆದ

ನಂತರ. ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ದಿನಾಂಕ 13/8/2020ರಂದು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯನ್ನು ನಡೆಸಲು ಸಮಯಾವಕಾಶ ಕಡಿಮೆ ಇರುವುದರಿಂದ ಈ ದಿನಾಂಕದ ನಂತರ ಯಾವುದೇ ಕಾರಣಕ್ಕೂ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

ಉಪ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).
4. ಕಛೇರಿ ಪ್ರತಿ.